ನಾಡಿನ ಶ್ರೇಷ್ಠ ಸಂಗೀತ ಪ್ರತಿಭೆ ಎಂ ಮಲ್ಲಿಕಾರ್ಜುನ ಮನ್ಸೂರ ಅವರ ಶ್ರಮದ ಅಭಿವೃದ್ಧಿ

(376)343; ಜಗದೀಶ್ ಶೆಟ್ಟರ್ (ಹುಬ್ಬಳ್ಳಿ–ಧಾರವಾಡ ಕೇಂದ್ರೀಯ)

ಅ) ಕನ್ನಡ ನಾಡು ಕಂಡ ಶ್ರೇಷ್ಠ ಸಂಗೀತ ಪ್ರತಿಭೆ ಪಂಡಿತ್ ಮಲ್ಲಿಕಾರ್ಜುನ ಮನ್ಸೂರ್ ಅವರ ಸ್ವಗ್ರಾಮದ ಅಭಿವೃದ್ಧಿ ಹಾಗೂ ಅವರು ಜನಿಸಿದ ಮನೆಯನ್ನು ಸ್ಮಾರಕ ಮಾಡುವ ಯೋಜನೆ ಯಾವ ಹಂತದಲ್ಲಿದೆ. ಈವರೆಗೆ ಪೂರ್ಣಗೊಳ್ಳದಿರಲು ಕಾರಣವೇನು

ಆ) ಯೋಜನೆ ಕಾಮಗಾರಿಗಳಿಗೆ ಮಂಜೂರು ಮಾಡಿದ, ಬಿಡುಗಡೆ ಮಾಡಿದ ಹಾಗೂ ವೆಚ್ಚ ಮಾಡಿದ ಹಣವೆಷ್ಟು,

ಇ) ಬಿಡುಗಡೆ ಮಾಡಲಾದ ಹಣದಲ್ಲಿ ಕೈಗೊಳ್ಳಲಾದ ಅಭಿವೃದ್ಧಿ ಕಾಮಗಾರಿಗಳು ಯಾವುವು, ಈ ಯೋಜನೆಯನ್ನು ಯಾವಾಗ ಪೂರ್ಣಗೋಳಿಸಲಾಗುವುದು.?

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಪಂಡಿತ್ ಮಲ್ಲಿಕಾರ್ಜುನ ಮನ್ಸೂರ್ ಸ್ವಗ್ರಾಮದ ಪ್ರವೇಶದ್ವಾರದಲ್ಲಿ ಸ್ವಾಗತ ಕಮಾನು ನಿರ್ಮಿಸಲಾಗಿದೆ ಹಾಗೂ ರಸ್ತೆ ಮತ್ತು ಚರಂಡಿ ಕಾಮಗಾರಿಗಳು ಪೂರ್ಣಗೊಂಡಿವೆ. ಅವರು ಜನಿಸಿದ ಮನೆಯನ್ನು ಸ್ಮಾರಕ ಮಾಡುವ ಯೋಜನೆ ಸರ್ಕಾರದ ಪರಿಶೀಲನೆಯಲ್ಲಿ ಇದೆ

ಆ) ಈ ಕಾಮಗಾರಿಗಳಿಗೆ ಇಲಾಖೆಯಿಂದ ಈಗಾಗಲೇ ₹ 1.00 ಕೋಟಿ ಅನುದಾನ ನೀಡಿದೆ ಈ ಹಣ ಪೂರ್ತಿಯಾಗಿ ಖರ್ಚಾಗಿದೆ.

ಇ) ಬಿಡುಗಡೆ ಮಾಡಲಾದ ಅನುದಾನವನ್ನು ಸ್ವಾಗತ ಕಮಾನು, ರಸ್ತೆ ಮತ್ತು ಚರಂಡಿ ಕಾಮಗಾರಿಗೆ ವೆಚ್ಚ ಮಾಡಲಾಗಿದೆ